1489(1603) ಶ್ರೀ ರವೀಂದ್ರನಾಥ್ ಎಸ್.ಎ. (ಮಾಯಕೊಂಡ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಭದ್ರಾ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ಕಬ್ಬು ಸರಬರಾಜುದಾರರಿಂದ ಸಂಗ್ರಹಿಸಲಾದ ಹಣವನ್ನು ಕಾನೂನು ಬಾಹಿರವಾಗಿ ಕ್ಷೇತ್ರಾಭಿವೃದ್ಧಿ ನಿಧಿಗೆ ವರ್ಗಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸರ್ಕಾರ ತೆಗೆದು ಕೊಂಡಿರುವ ಕ್ರಮಗಳೇನು?

ಶ್ರೀ ಆರ್.ವಿ.ದೇಶಪಾಂಡೆ (ಸಹಕಾರ ಸಚಿವರು):

ಅ) ಕಾರ್ಖಾನೆಯ ಉಪನಿಯಮ 37ರ ಅನ್ವಯ ಎನ್.ಆರ್.ಡಿ. ಹಣವನ್ನು ಸದಸ್ಯರಿಂದ ಸಂಗ್ರಹಿಸಲು ಮತ್ತು ಕ್ಷೇತ್ರಾಭಿವೃದ್ಧಿ ನಿಧಿಗೆ ವರ್ಗಾಯಿಸುವ ಅವಕಾಶವಿರುತ್ತದೆ. ಈ ನಿಯಮಾನುಸಾರ ಹಣ ವರ್ಗಾವಣೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಉದ್ಭವಿಸುವುದಿಲ್ಲ.

1490(1609) ಶ್ರೀ ರವೀಂದ್ರನಾಥ್ ಎಸ್.ಎ. (ಮಾಯಕೊಂಡ) ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 2003 ಜೂನ್ ಮತ್ತು 2004ರಲ್ಲಿ ಭದ್ರಾ ಸಹಕಾರಿ ಸ್ಪಕ್ಕರೆ ಕಾರ್ಖಾನೆಯಲ್ಲಿ ತಾಂತ್ರಿಕ ನೀತಿಯನ್ನು ಅನುಸರಿಸದೆ ಟರ್ಬೈನ್‌ಗಳು ಹಾಳಾಗಿ ಕಾರ್ಖಾನೆಗೆ ಲಕ್ಷಾಂತರ ರೂಪಾಯಿಗಳು ನಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸಂಬಂಧಪಟ್ಟವರ ವಿರುದ್ಧ ತೆಗೆದುಕೊಂಡ ಕ್ರಮವೇನು;

ಇ) ಕ್ರಮ ತೆಗೆದುಕೊಳ್ಳದಿದ್ದಲ್ಲಿ, ಕಾರಣಗಳೇನು;

ಶ್ರೀ ಆರ್.ವಿ.ದೇಶಪಾಂಡೆ (ಸಹಕಾರ ಸಚಿವರು):

ಅ) ಹೌದು.

ಆ) ಕಾರ್ಖಾನೆಯು ಹಳೆಯ ಟರ್ಬೈನ್‌ನ್ನು ಬದಲಾಯಿಸಿ ಹೊಸ ಟರ್ಬೈನ್ ಅಳವಡಿಸಲು ಸರ್ಕಾರವು ಪತ್ರ ಕ್ರ. ಸಾಮಾತು 130 ಸಸಕಾ 2002 ದಿ: 29-8-2002 ಪತ್ರದನ್ವಯ ಅನುಮತಿ ನೀಡಿತ್ತು. ಆದರೆ ಕಾರ್ಖಾನೆಯು ಕ್ಲಿಷ್ಟಕರ ಆರ್ಥಿಕ ಪರಿಸ್ಥಿತಿಯಿಂದಾಗಿ ಹೊಸ ಟರ್ಬೈನ್ ಅಳವಡಿಸಿರುವುದಿಲ್ಲ. ಕಾರ್ಖಾನೆಯು ಹೊಸ ಟರ್ಬೈನ್ ಅಳವಡಿಸಿಕೊಳ್ಳುವಲ್ಲಿ ವಿಫಲವಾಗಿದ್ದರಿಂದ ಈ ಬಗ್ಗೆ ಕರ್ನಾಟಕ ಸಹಕಾರಿ ಸಂಘಗಳ ಕಾಯ್ದೆ ಕಲಂ 64 ರಡಿ ವಿಚಾರಣೆಗೆ ಕೈಗೆತ್ತಿಕೊಳ್ಳಲಾಗಿದೆ. ವಿಚಾರಣಾ ಮಧ್ಯಂತರ ಆದೇಶ ಈ ವೈಫಲ್ಯಕ್ಕೆ ಆಡಳಿತ ಮಂಡಳಿಯನ್ನು ಜವಾಬ್ದಾರಿಯನ್ನಾಗಿ ಮಾಡಿದ್ದು ಕಲಂ 68 ರಡಿ ನ್ಯೂನತೆ ಸರಿಪಡಿಸಿಕೊಳ್ಳುವ ಕ್ರಮಕ್ಕಾಗಿ ಸಕ್ಕರೆ ನಿರ್ದೇಶಕರು, ಬೆಂಗಳೂರು ಇವರು ಆದೇಶ ಸಂ: ಡಿಎಸ್‌ಕೆ:ಇಎಸ್‌ಟಿಎಸ್ 23/2000-01 ದಿ: 7-12-2004 ರಲ್ಲಿ ಆದೇಶ ಹೊರಡಿಸಿರುತ್ತಾರೆ.

1491(1209) ಶ್ರೀ ಲೇವುನಾಯಕ್ ಬೆಳಮಗಿ (ಕಮಲಾಪುರ) ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕಮಲಾಪುರ ಮತ ಕ್ಷೇತ್ರದಲ್ಲಿ 2002-03 ಹಾಗೂ 2003-04ನೇ ಸಾಲಿನಲ್ಲಿ ರೈತರಿಗೆ ನೀಡಿರುವ ಬೆಳೆ ವಿಮೆ ಪರಿಹಾರ ಎಷ್ಟು (ವಿವರ ನೀಡುವುದು)

ಆ) ಗುಲ್ಬರ್ಗಾ ತಾಲ್ಲೂಕಿನಲ್ಲಿ ಹಾಗೂ ಅಳಂದ ತಾಲ್ಲೂಕಿನಲ್ಲಿ ಬೆಳೆ ವಿಮೆ ನೀಡುವಲ್ಲಿ ತಾರತಮ್ಯ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?